ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ಕಂದಾಯ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ    ದಿನಾಂಕ : DATE : 10/03/2020

# ಸರಕಾರಿ ಜಮೀನು ಭೂಗಳ್ಳರ ಕೈಗೆ ಸೇರಿಸುವುದಿಲ್ಲ

10/3/2020

**ವಿಶ್ವವಾಣಿ ಸುದ್ದಿಮನೆ** ವಿಧಾನ ಸಭೆ

ರಾಜಧಾನಿ ಬೆಂಗಳೂರಲ್ಲಿ ಸರಕಾರಿ ಜಮೀನು ಭೂಗಳ್ಳರ ಪಾಲಾಗುತ್ತಿರುವ ವಿಚಾರಕ್ಕೆ ಸಂಬಂಧಿಸಿದಂತೆ ಆರಂಭಗೊಂಡ ಚರ್ಚೆ, ಭಾರಿ ಚರ್ಚೆಗೆ ಗ್ರಾಸವಾಯಿತು.

ಮಾಜಿ ಸಚಿವ ಕೃಷ್ಣಬೈರೇಗೌಡ ಅವರು ಬ್ಯಾಟರಾಯನಪುರದಲ್ಲಿ ನಡೆದ ಅವ್ಯವಹಾರದ ಬಗ್ಗೆ ಕೇಳಿದ ಪ್ರಶ್ನೆಗೆ, ಉಪಪ್ರಶ್ನೆಗಳಾಗಿ ಹಲವು ಶಾಸಕರು ಭೂಕಬಳಿಕೆಗೆ ಸಂಬಂಧಿಸಿದಂತೆ ಪ್ರಶ್ನೆಗಳನ್ನು ಕೇಳಿದರು. ಈ ವೇಳೆ ಆಡಳಿತ-ಪ್ರತಿಪಕ್ಷ ಶಾಸಕರು ಸರಕಾರಿ ಭೂ ರಕ್ಷಿಸುವ ನಿಟ್ಟಿನಲ್ಲಿ ಸರಕಾರ ತಗೆದುಕೊಂಡಿರುವ ನಿಲುವೇನು ಎನ್ನುವುದನ್ನು ಸ್ಪಷ್ಟಪಡಿಸಬೇಕು ಎಂದು ಆಗ್ರಹಿಸಿದರು.

ಈ ವೇಳೆ ಮಾತನಾಡಿದ ಕಂದಾಯ ಸಚಿವ ಅಶೋಕ, ಸರಕಾರಿ ಜಮೀನು ಒತ್ತುವರಿಗೆ ಅವಕಾಶ ನೀಡುವುದಿಲ್ಲ, ಒತ್ತುವರಿ ತೆರವುಗೊಳಿಸಿದ ಜಮೀನುಗಳನ್ನು ಒಂದು ಲಕ್ಷ ಮನೆ ಯೋಜನೆ ಸೇರಿದಂತೆ ಸರಕಾರಿ ಯೋಜನೆಗಳಿಗೆ ಮಂಜೂರು ಮಾಡಲಾಗುವುದು ಎಂದು ಭರವಸೆ ನೀಡಿದ್ದಾರೆ.

ಇದಕ್ಕೂ ಮೊದಲು ಮಾತನಾಡಿದ ಕೃಷ್ಣಬೈರೇಗೌಡ, ಬ್ಯಾಟರಾಯನಪುರ ಕ್ಷೇತ್ರದಲ್ಲಿ ಸರಕಾರಿ ಜಮೀನನ್ನು ಖಾಸಗಿ ವ್ಯಕ್ತಿಗಳು ತಮ್ಮ ಹೆಸರಿಗೆ ಮಾಡಿದ ಪ್ರಕರಣವನ್ನು ಸರಕಾರ ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥರ ವಿರುದ್ಧ ಕ್ರಮಕೈಗೊಳ್ಳಬೇಕು ಎಂದು ಆಗ್ರಹಿಸಿದರು. ಬ್ಯಾಟರಾಯನಪುರದಲ್ಲಿ ನಡೆದ ಅಕ್ರಮವನ್ನು ವಿವರಿಸಿದರು. ಈ ಅಕ್ರಮ ಜನವರಿ ತಿಂಗಳಲ್ಲೇ ನಡೆದಿದೆ. ತಮ್ಮ ಗಮನಕ್ಕೆ ಬಂದ ತಕ್ಷಣ ಅದನ್ನು ಅಧಿಕಾರಿಗಳಿಗೆ ತಿಳಿಸಿದ್ದೇನೆ. ಆದರೆ ಯಾವುದೇ ಕ್ರಮಕೈಗೊಂಡಿರಲಿಲ್ಲ. ತಾವು ಈ ಬಗ್ಗೆ ವಿಧಾನಸಭೆಗೆ ಪ್ರಶ್ನೆ ಕಳುಹಿಸಿದಾಗ ಕ್ರಮಕೈಗೊಳ್ಳಲಾಗಿದೆ. ಇಂತಹ ಹಲವು ಪ್ರಕರಣಗಳು ಸಬ್ ರಿಜಿಸ್ಟ್ರಾರ್ ಕಚೇರಿಯಲ್ಲಿ ನಡೆಯುತ್ತಿದೆ. ಈ ಬಗ್ಗೆ ಕ್ರಮಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಇದಕ್ಕೆ ಉತ್ತರಿಸಿದ ಅಶೋಕ, ಸರಕಾರಿ ಜಮೀನು ಒತ್ತುವರಿ ತೆರವು ಮಾಡಿ ರಕ್ಷಿಸಲು ಸದನ ಸಮಿತಿಯನ್ನು ರಚಿಸಲಾಗಿದ್ದು, ಈ ಸಮಿತಿಗೆ ಸಂಪೂರ್ಣ ಅಧಿಕಾರ ನೀಡಲಾಗಿದೆ. ಈ ಸಮಿತಿಯಲ್ಲಿ ಎಲ್ಲಾ ಪಕ್ಷಗಳ ಸದಸ್ಯರು ಇದ್ದಾರೆ. ಮುಖ್ಯಮಂತ್ರಿ ಕೂಡ ಈ ಬಗ್ಗೆ ಸ್ಪಷ್ಟ ಸೂಚನೆ ನೀಡಿದ್ದು, ನಗರದ ಯಾವುದೇ ಭಾಗದಲ್ಲಿ ಸರಕಾರಿ ಜಮೀನು ಖಾಸಗಿಯವರ ಕೈಪಾಲಾಗದಂತೆ ನೋಡಿಕೊಳ್ಳುವಂತೆ ಆದೇಶಿಸಿದ್ದಾರೆ ಎಂದರು.

ಇನ್ನು ಬ್ಯಾಟರಾಯನಪುರದಲ್ಲಿ ನಡೆದ ಅಕ್ರಮದ ಬಗ್ಗೆ ಗಮನಕ್ಕೆ ತಂದ ಕೂಡಲೇ ಅಂತಹ ಅಧಿಕಾರಿಗಳನ್ನು ಬೇರೆಡೆಗೆ ವರ್ಗಾವಣೆ ಮಾಡುತ್ತಿದ್ದೇವೆ. ಆದರೆ ಅವರು ಕೆಎಟಿಗೆ ಹೋಗಿ ಮತ್ತೆ ಅದೇ ಜಾಗದಲ್ಲಿ ಬಂದು ಕುಳಿತುಕೊಳ್ಳುತ್ತಿದ್ದಾರೆ, ಅಧಿಕಾರಿಗಳಿಗೆ ಭಯ ಇಲ್ಲದಂತಾಗಿದೆ ಎಂದು ತಮ್ಮ ಅಸಹಾಯಕತೆ ವ್ಯಕ್ತಪಡಿಸಿದರು.

## ವಿಧಾನಸೌಧ ಸರಕಾರಿ ಜಮೀನೇ? ಖಾತ್ರಿಪಡಿಸಿಕೊಳ್ಳಿ



ಇನ್ನು ಭೂಗಳ್ಳರು ಒಂದು ಪ್ರಾಪರ್ಟಿ ಐಡಿ ನಂಬರ್‌ನಿಂದ ಹತ್ತಾರು ಜಮೀನನ್ನು ಅಕ್ರಮವಾಗಿ ರಿಜಿಸ್ಟಾರ್ ಮಾಡಿಸಿಕೊಳ್ಳುತ್ತಿದ್ದಾರೆ. ಇದರಿಂದ ಸರಕಾರಕ್ಕೆ ಕೋಟ್ಯಂತರ ರು. ನಷ್ಟವಾಗುತ್ತಿದೆ ಎಂದು ಆರೋಪಿಸಿದ ಕೃಷ್ಣಬೈರೇಗೌಡ, ಕಾಗೇರಿ ಅವರನ್ನು ಉದ್ದೇಶಿಸಿ 'ವಿಧಾನಸೌಧದ ಜಾಗ ಸರಕಾರಿ ಹೆಸರಲ್ಲಿ ಇದೆಯೇ? ಎನ್ನುವುದನ್ನು ಖಾತ್ರಿಪಡಿಸಿಕೊಳ್ಳಿ, ಇಲ್ಲದಿದ್ದರೆ ಈ ಜಾಗವನ್ನು ಕೂಡ ಪರಭಾರೆ ಮಾಡಿಕೊಳ್ಳಬಹುದು ಎಂದು ಹೇಳಿದರು.